STAR.

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 220
ಸದಸ್ಯರ ಹೆಸರು : ಶ್ರೀ. ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು
ಉತ್ತರಿಸುವ ದಿನಾಂಕ : 13.08.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ದಕ್ಷಿಣ ಜಿಲ್ಲೆಯ ಹಾರೋಹಳ್ಳಿಯನ್ನು ನೂತನ ತಾಲ್ಲೂಕು ಎಂದು ಘೋಷಣೆ ಮಾಡಲಾಗಿದ್ದು, ಇಲ್ಲಿ ತಾಲ್ಲೂಕು ಮಟ್ಟದ ಕಛೇರಿಗಳನ್ನು ನಿರ್ಮಾಣ ಮಾಡಲು ಸ್ಥಳಗಳನ್ನು ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ, ಯಾವ ಯಾವ ಕಛೇರಿಗಳಿಗೆ ಎಲ್ಲೆಲ್ಲಿ ಮತ್ತು ಎಷ್ಟು ಜಾಗವನ್ನು ಗುರುತಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು) | ಬೆಂಗಳೂರು ದಕ್ಷಿಣ ಜಿಲ್ಲೆಯ ಹಾರೋಹಳ್ಳಿ ತಾಲ್ಲೂಕನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 07 ಎಲ್ಆರ್‌ಡಿ 2019, ದಿನಾಂಕ:28.01.2022ರ ಆದೇಶದನ್ವಯ ಹೊಸ ತಾಲ್ಲೂಕಾಗಿ ರಚನೆಯಾಗಿರುತ್ತದೆ. ಪ್ರಜಾಸೌಧ ಹಾರೋಹಳ್ಳಿ ತಾಲ್ಲೂಕು ಆಡಳಿತ ಕೇಂದ್ರ ಕಟ್ಟಡವನ್ನು ನಿರ್ಮಾಣ ಮಾಡಲು ಹಾರೋಹಳ್ಳಿ ತಾಲ್ಲೂಕು, ಮರಳವಾಡಿ ಹೋಬಳಿ, ಚಿಕ್ಕಸಾದೇನಹಳ್ಳಿ ಗ್ರಾಮದ ಸರ್ವೆ ನಂ.14ರಲ್ಲಿ 4-25 ಎ/ಗುಂ ಜಮೀನನ್ನು ಕಾಯ್ದಿರಿಸಲಾಗಿರುತ್ತದೆ. |
| ಆ) | ಹಾರೋಹಳ್ಳಿ ನೂತನ ತಾಲ್ಲೂಕಿನ ಆಡಳಿತ ಸೌಧ (ಮಿನಿ ವಿಧಾನ ಸೌಧ) ಕಚೇರಿ ನಿರ್ಮಾಣಕ್ಕಾಗಿ ಮತ್ತು ಮೂಲಭೂತ ಸೌಕರ್ಯಗಳಿಗಾಗಿ ಮೀಸಲಿರಿಸಲಾಗಿರುವ ಹಾಗೂ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಈ ಕಚೇರಿಗೆ ಕಲ್ಪಿಸುತ್ತಿರುವ ಮೂಲಭೂತ ಸೌಕರ್ಯಗಳೇನು? (ಸಂಪೂರ್ಣ ವಿವರ ನೀಡುವುದು). | • ಪ್ರಜಾ ಸೌಧ ಹಾರೋಹಳ್ಳಿ ತಾಲ್ಲೂಕು ಆಡಳಿತ ಕೇಂದ್ರ ಕಟ್ಟಡವನ್ನು ನಿರ್ಮಾಣ ಮಾಡಲು ಸರ್ಕಾರದ ಆದೇಶ ಸಂಖ್ಯೆ:ಕಂಇ 87 ಡಬ್ಲೂಬಿಆರ್ 2024, ದಿನಾಂಕ:10.10.2024ರಲ್ಲಿ Type-A ಮಾದರಿಯಲ್ಲಿ ರೂ.8.60 ಕೋಟಿಗಳ ಅಂದಾಜು ಮೊತ್ತದಲ್ಲಿ ನಿರ್ಮಿಸಲು ಕರ್ನಾಟಕ ಗೃಹ ಮಂಡಳಿವತಿಯಿಂದ ಸವಿವರ ಅಂದಾಜು ಪಟ್ಟಿ ಮತ್ತು ನಕ್ಷೆಯನ್ನು ಸಲ್ಲಿಸಿ ಆಡಳಿತಾತ್ಮಕ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು ಅನುಮೋದನೆ ನೀಡಲಾಗಿರುತ್ತದೆ.<br>• ಸರ್ಕಾರದ ಆದೇಶ ಸಂಖ್ಯೆ:ಕಂಇ 32 ಎಲ್ಆರ್‌ಡಿ 2022, ದಿನಾಂಕ:01.08.2022 ಮತ್ತು ದಿನಾಂಕ: 04.03.2023ರಲ್ಲಿ ತಲಾ ರೂ.8.00 ಲಕ್ಷಗಳಂತೆ ಒಟ್ಟು ರೂ.16.00 ಲಕ್ಷಗಳನ್ನು ಹಾರೋಹಳ್ಳಿ ತಾಲ್ಲೂಕಿಗೆ ಆಡಳಿತಾತ್ಮಕ ಹಾಗೂ ಇತರೆ ವೆಚ್ಚಗಳನ್ನು ಭರಿಸಲು ಬಿಡುಗಡೆ ಮಾಡಲಾಗಿರುತ್ತದೆ.<br>• ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ಕಂಇ 64 ಎಮ್ಎಸ್‌ಟಿ 2021, ದಿನಾಂಕ:07.03.2023ರಲ್ಲಿ ಇ-ಆಫೀಸ್ ಬಳಕೆಗಾಗಿ 03 ಕಂಪ್ಯೂಟರ್, 02 ಸ್ಕ್ಯಾನರ್ ಖರೀದಿಸಲು ರೂ.3.10 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿರುತ್ತದೆ ಹಾಗೂ ಪ್ರತಿ ತ್ರೈಮಾಸಿಕ ಕಂತುಗಳಲ್ಲಿ ಕಛೇರಿ ವೆಚ್ಚಗಳಿಗೆ ಬೇಕಾಗಿರುವ ಅನುದಾನವನ್ನು ಹಂತ ಹಂತವಾಗಿ ಬಿಡುಗಡೆಗೊಳಿಸಲಾಗುತ್ತಿದೆ. |

**ಸಂ: ಕಂಇ 69 ಡಬ್ಲ್ಯೂಬಿಆರ್ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು